ಕಟ್ಟಡ ಕಾರ್ಮಿಕರ ಬದುಕು ಅತ್ಯಂತ ಶೋಚನೀಯವಾಗಿದೆ. ಬೃಹತ್ ಮನೆಗಳನ್ನು ನಿರ್ಮಿಸುವ ಕಾರ್ಮಿಕರ ಕುಟುಂಬಗಳಿಗೆ ನಿವೇಶನ ಇಲ್ಲವೆಂದು 2015ರಿಂದ 2024ರವರೆಗೂ ಮನವಿ ಸಲ್ಲಿಸುತ್ತಾ ಬಂದರೂ ಅಹವಾಲು ಸ್ವೀಕರಿಸಿ ಜನಪ್ರತಿನಿಧಿಗಳಿಂದ ಆಶ್ವಾಸನೆ ಬಿಟ್ಟರೆ ನಿವೇಶನ ನೀಡುವ ಪ್ರಯತ್ನವೇ ನಡೆದಿಲ್ಲ.

● **ಆರ್.ಬಸವರಾಜ್** 0ಕಟ್ಟಡ ಕಾರ್ಮಿಕರ ಸಂಘಟನೆಯ ಪದಾಧಿಕಾರಿ

ಕನ್ನಡಪ್ರಭ
ಶುಕ್ರವಾರ 20.12.2024

ಸುದ್ದಿ ಸಿಂಚನ

ಹಳೆ ಪಿಂಚಣಿಗಾಗಿ ಒತ್ತಾಯ

ಕಂಪ್ಲಿ: ಬೆಳಗಾವಿಯ ಸುವರ್ಣಸೌಧ ಮುಂಭಾಗದಲ್ಲಿ ಹಳೆ ಪಿಂಚಣಿಗಾಗಿ ಒತ್ತಾಯಿಸಿ ರಾಜ್ಯ ಅನುದಾನಿತ ಶಾಲೆ ಕಾಲೇಜುಗಳ ಪಿಂಚಣಿ ವಂಚಿತ ನೌಕರರ ಸಂಘದ ಪದಾಧಿಕಾರಿಗಳು ಶಿಕ್ಷಣ ಸಚಿವ ಮಧು ಬಂಗಾರಪ್ಪಗೆ ಮನವಿ ಸಲ್ಲಿಸಿದ್ದೇವೆ ಎಂದು ಇಲ್ಲಿನ ಸಂಘದ ರಾಜ್ಯ ಸಹ ಕಾರ್ಯದರ್ಶಿ ಅಂಬಿಗರ ಮಂಜುನಾಥ ತಿಳಿಸಿದರು. ಅನುದಾನಿತ ಶಾಲಾ ಕಾಲೇಜು ನೌಕರರಿಗೆ ಪಿಂಚಣಿ ನೀಡುವ ಕುರಿತು ಪ್ರಣಾಳಿಕೆಯಲ್ಲಿ ಪ್ರಕಟಿಸಿದ್ದು ಪಿಂಚಣಿ ನೀಡುವುದು ನಮ್ಮ ಹಕ್ಕಾಗಿದೆ. ಅನುದಾನಿತ ಶಾಲೆಗಳ ಶಿಕ್ಷಕರಿಗೆ ಪಿಂಚಣಿ ಕೊಡುವ ಕುರಿತು ಚರ್ಚೆ ಅಧಿವೇಶನದಲ್ಲಿ ಬಹುದೀರ್ಘ ನಡೆದಿದ್ದು ಪರಿಶೀಲಿಸಿ ಬೇಡಿಕೆ ಈಡೇರಿಸಲಾಗುವುದು. ಕಲ್ಯಾಣ ಕರ್ನಾಟಕ ಭಾಗದಲ್ಲಿ ಶೇ.80 ಶಿಕ್ಷಕರ ನೇಮಕ ಮಾಡಲಾಗುವುದು. ಪಿಂಚಣಿ ಕೊಡುವುದು ಒಳ್ಳೆಯದಾಗಿದ್ದು ಕ್ಯಾಬಿನೆಟ್ ನಲ್ಲಿ ಒತ್ತಾಯಿಸಲಾಗುವುದು ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ ಎಂದರು.
ಈ ಸಂದರ್ಭದಲ್ಲಿ ಎಂಎಲ್‌ಸಿ ಶಶೀಲ್ ನಮೋಶಿ, ಸಿಂಧಗಿ ಶಾಸಕ ಅಶೋಕ ಮನಗುಳಿ, ಸಂಘದ ರಾಜ್ಯಾಧ್ಯಕ್ಷ ಜಿ.ಹನುಮಂತಪ್ಪ, ರಾಜ್ಯ ಗೌರವಾಧ್ಯಕ್ಷ ಎಚ್.ನಾಗರಾಜಪ್ಪ ಬುಕ್ಕಾಂಬುದಿ, ಪ್ರಚಾರ ಸಮಿತಿ ಅಧ್ಯಕ್ಷ ವೆಂಕಟಾಚಲ, ಪ್ರಧಾನ ಕಾರ್ಯದರ್ಶಿ ಮುತ್ತುರಾಜ್ ಮತ್ತಿಕೊಪ್ಪ, ಕಾರ್ಯದರ್ಶಿ ಲಕ್ಷ್ಮಿಪುತ್ರ ಕೀರನಹಳ್ಳಿ ಸೇರಿ ಪದಾಧಿಕಾರಿಗಳು ಇದ್ದರು.

ಸಿರಿಧಾನ್ಯ: ಸಹಾಯಧನಕ್ಕೆ ಅರ್ಜಿ ಆಹ್ವಾನ

ಹೊಸಪೇಟೆ: 2024-25 ನೇ ಸಾಲಿನ ಆಹಾರ ಮತ್ತು ಪೌಷ್ಟಿಕ ಭದ್ರತೆ ಯೋಜನೆ ದ್ವಿದಳ ಧಾನ್ಯ ಕಾರ್ಯಕ್ರಮದಡಿ ರೈತ ಉತ್ಪಾದಕರ ಸಂಸ್ಥೆ, ಸ್ವಸಹಾಯ ಗುಂಪುಗಳಿಗೆ ಮಾರುಕಟ್ಟೆ ಬೆಂಬಲ ಹಾಗೂ ನ್ಯೂಟ್ರಿ ಸಿರಿಧಾನ್ಯ ಕಾರ್ಯಕ್ರಮದಡಿ ಸಿರಿಧಾನ್ಯಗಳ ಕಿಚನ್ ಸ್ಥಾಪನೆಗೆ ಸಂಸ್ಕರಣೆ ಘಟಕಗಳ ಅಳವಡಿಕೆ, ಮಾರುಕಟ್ಟೆ ಬೆಂಬಲ ಮತ್ತು ಸಂಸ್ಕರಣಾ ಕ್ಲಸ್ಟರ್‌ಸ್ಥಾಪನೆಗೆ ಸಹಾಯಧನ ನೀಡಲು ವಿಜಯನಗರ ಜಿಲ್ಲೆಯ ರೈತರು, ರೈತ ಉತ್ಪಾದಕರ ಸಂಸ್ಥೆಗಳ, ಸ್ವಸಹಾಯ ಗುಂಪುಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ವಿಜಯನಗರ ಜಂಟಿ ಕೃಷಿ ನಿರ್ದೇಶಕ ಶರಣಪ್ಪ ಮುದಗಲ್ ತಿಳಿಸಿದ್ದಾರೆ.ರೈತರು, ನೋಂದಾಯಿತ ರೈತ ಉತ್ಪಾದಕರ ಸಂಸ್ಥೆ ಹಾಗೂ ರೈತರ ಗುಂಪುಗಳು ಗರಿಷ್ಠ 50 ಲಕ್ಷ ರು. ವೆಚ್ಚದಲ್ಲಿ ಪ್ರಾಥಮಿಕ ಮತ್ತು ದ್ವಿತೀಯ ಸಂಸ್ಕರಣಾ ಘಟಕಗಳೊಂದಿಗೆ ಶೇಖರಣಾ ಗೋದಾಮು ಸೌಲಭ್ಯ ಒದಗಿಸಬಹುದು. ಆಸಕ್ತ ರೈತರು, ರೈತ ಉತ್ಪಾದಕರ ಸಂಸ್ಥೆಗಳು, ಸ್ವ-ಸಹಾಯ ಗುಂಪುಗಳು ತಮ್ಮ ರೈತ ಸಂಪರ್ಕ ಕೇಂದ್ರಗಳಲ್ಲಿ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಜನವರಿ 5 ರೊಳಗೆ ಅರ್ಜಿಗಳನ್ನು ಸಲ್ಲಿಸಲು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹಂಪಿಯಲ್ಲಿ ಮತ್ತೆ ಉತ್ಖನನ ಕಾರ್ಯಕ್ಕೆ ಚಾಲನೆ

ಕೇಂದ್ರ ಪುರಾತತ್ವ ಇಲಾಖೆಯಿಂದ ಶೋಧನೆ | ಐತಿಹಾಸಿಕ ಅವಶೇಷ ಹುಡುಕುವ ಕಾರ್ಯ | ಹಂಪಿ ಸಂಶೋಧಕರ ಸ್ವರ್ಗ

● **ಕನ್ನಡಪ್ರಭ ವಾರ್ತೆ** ಹೊಸಪೇಟೆ

ವಿಶ್ವವಿಖ್ಯಾತ ಹಂಪಿಯಲ್ಲಿ ಮತ್ತೆ ಭಾರತೀಯ ಪುರಾತತ್ವ ಇಲಾಖೆಯ ಹಂಪಿ ವಲಯದಿಂದ ಉತ್ಖನನ ಕಾರ್ಯಕ್ಕೆ ಚಾಲನೆ ನೀಡಲಾಗಿದೆ. ಹಂಪಿಯ ಪಾನ್ ಸುಪಾರಿ ಬಜಾರ್‌ನಲ್ಲಿ ಉತ್ಖನನ ಕಾರ್ಯ ಕೈಗೆತ್ತಿಕೊಳ್ಳಲಾಗಿದೆ.

ವಿಜಯನಗರ ಸಾಮ್ರಾಜ್ಯದ ರಾಜಧಾನಿ ಹಂಪಿಯು ಸಂಶೋಧಕರ ಸ್ವರ್ಗವಾಗಿದೆ. ಜೊತೆಗೆ ದಕ್ಷಿಣ ಭಾರತದಲ್ಲಿ ಅತಿ ದೊಡ್ಡ ಉತ್ಖನನ ಸ್ಥಳ ಎಂದು ಪ್ರಸಿದ್ಧಿಯಾಗಿದೆ. ಹಂಪಿಯಲ್ಲಿ ಈ ಹಿಂದೆ ಇಲಾಖೆಯಿಂದಲೇ ಉತ್ಖನನ ಕಾರ್ಯ ನಡೆದಿದೆ. ಹಂಪಿಯಲ್ಲಿ 70ರ ದಶಕದಿಂದಲೂ ಉತ್ಖನನ ಕಾರ್ಯ ನಡೆದಿದೆ. ಪುರಾತತ್ವ ಇಲಾಖೆ ಆಸ್ಥೆಯಿಂದ ಹಂಪಿ ಈಗ ದೇಶ, ವಿದೇಶಿ ಪ್ರವಾಸಿಗರನ್ನು ಕೂಡ ಸೆಳೆಯುತ್ತಿದೆ.ಹಂಪಿ ಸ್ಮಾರಕಗಳ ಗುಚ್ಛವನ್ನು ಮುಂದಿನ ಪೀಳಿಗೆಗೆ ಸಂರಕ್ಷಿಸಲು ಪುರಾತತ್ವ ಇಲಾಖೆ ಶ್ರಮ ವಹಿಸಿದ ಪರಿಣಾಮ 1986ರಲ್ಲಿ ಯುನೆಸ್ಕೊ ಪಟ್ಟಿಯಲ್ಲಿ ಹಂಪಿ ಸ್ಮಾರಕಗಳಿಗೆ ಜಾಗ ದೊರೆತಿದೆ. ಹಂಪಿಯ ಸ್ಮಾರಕಗಳ ವೀಕ್ಷಣೆಗೆ ವಾರ್ಷಿಕ 2 ಲಕ್ಷಕ್ಕೂ ಅಧಿಕ ವಿದೇಶಿ ಪ್ರವಾಸಿಗರು ಹಾಗೂ 30 ಲಕ್ಷಕ್ಕೂ ಅಧಿಕ ದೇಶಿ ಪ್ರವಾಸಿಗರು ಆಗಮಿಸುತ್ತಿದ್ದಾರೆ.

ಹಂಪಿಯ ಪಾನ್ ಸುಪಾರಿ ಬಜಾರ್‌ನಲ್ಲಿ ಉತ್ಖನನ ಕಾರ್ಯವನ್ನು ಪುರಾತತ್ವ ಇಲಾಖೆ ಕೈಗೊಂಡಿದೆ.

> ಹಂಪಿಯಲ್ಲಿ ಪುರಾತತ್ವ ಇಲಾಖೆಯಿಂದ ನಡೆಸಲಾಗುತ್ತಿದೆ. ವಿಜಯನಗರ ಸಾಮ್ರಾಜ್ಯದ ರಾಜಧಾನಿ ಹಂಪಿಯಲ್ಲಿ ಇನ್ನಷ್ಟು ಸಂಶೋಧನೆ ನಡೆಯಬೇಕಿದೆ. ಇದರಿಂದ ಮುಂದಿನ ಪೀಳಿಗೆಗೆ ಇತಿಹಾಸ ಕಟ್ಟಿಕೊಡಬಹುದು.
> ● **ಎಂ.ಎಸ್. ದಿವಾಕರ್** ಜಿಲ್ಲಾಧಿಕಾರಿ

> ಹಂಪಿಯಲ್ಲಿ ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆಯಿಂದ ಪ್ರಸ್ತುತ ಉತ್ಖನನ ಮಾಡುತ್ತಿರುವುದು ಅತ್ಯಂತ ಮಹತ್ವವಾಗಿದೆ. ಇದರಿಂದ ಇನ್ನಷ್ಟು ಹೆಚ್ಚು ವಿಜಯನಗರ ಸಾಮ್ರಾಜ್ಯದ ಮಾಹಿತಿ ತಿಳಿದುಕೊಳ್ಳಬಹುದು.
> ● **ವಿರುಪಾಕ್ಷಿ ವಿ. ಹಂಪಿ** ರಾಜ್ಯ ಪ್ರವಾಸಿ ಮಾರ್ಗದರ್ಶಿಗಳ ಸಂಘದ ಪ್ರಧಾನ ಕಾರ್ಯದರ್ಶಿ

ಹಂಪಿಯಲ್ಲಿ ಇನ್ನಷ್ಟು ಶೋಧ ಕಾರ್ಯ ನಡೆಸಲು ಉತ್ಖನನ ನಡೆದಿದೆ. ಇದರಿಂದ ಇತಿಹಾಸಕಾರರು, ಸಂಶೋಧಕರು ವಿಜಯನಗರ ಸಾಮ್ರಾಜ್ಯ ಹಾಗೂ ಈ ನೆಲದ ಚರಿತ್ರೆ ಬಗ್ಗೆ ಬೆಳಕು ಚೆಲ್ಲಲಿದ್ದಾರೆ.

ಈ ಹಿಂದೆ ನಡೆದ ಉತ್ಖನನ ವೇಳೆ ಹಂಪಿಯಲ್ಲಿ ಹಲವು ಐತಿಹಾಸಿಕ ವಸ್ತುಗಳು ದೊರೆತಿವೆ. ಪ್ರಾಚ್ಯವಸ್ತುಗಳನ್ನು ಕಮಲಾಪುರದ ವಸ್ತು ಸಂಗ್ರಹಾಲಯದಲ್ಲಿ ಇಡಲಾಗಿದೆ. ಹಂಪಿಯಲ್ಲಿ ಮಹತ್ವದ ವಸ್ತುಗಳು ದೊರೆಯುವ ಹಿನ್ನೆಲೆಯಲ್ಲಿ ಪುರಾತತ್ವ ಇಲಾಖೆ ಈಗ ಉತ್ಖನನಕ್ಕೆ ಒತ್ತು ನೀಡಿದೆ. ಇದರಿಂದ ಹಂಪಿ, ವಿಜಯನಗರ ನೆಲದ ಮೇಲೆ ಇನ್ನಷ್ಟು ಬೆಳಕು ಚೆಲ್ಲಬಹುದು. ಈ ಮೂಲಕ ಮುಂದಿನ ಪೀಳಿಗೆಗೆ ಈ ನೆಲದ ಮಹತ್ವ ಸಾರಬಹುದಾಗಿದೆ.

ಕೇಂದ್ರ ಪುರಾತತ್ವ ಇಲಾಖೆಯ ಅಧೀಕ್ಷಕ ನಿಹಿಲ್ ದಾಸ್, ಉಪ ಅಧೀಕ್ಷಕಿ ಪ್ರೇಮಾ, ಅಧೀಕ್ಷಕ ಎಂಜಿನಿಯರ್ ಭರಣಿಧರ ಮಾರ್ಗದರ್ಶನದಲ್ಲಿ ಉತ್ಖನನ ಕಾರ್ಯ ನಡೆದಿದೆ. ಇಲಾಖೆಯ ಅನಿರುದ್ಧ ದೇಸಾಯಿ, ಸುನಿಲ್, ಅಬ್ದುಲ್, ಕುಮಾರ್‌ಮತ್ತು ಸಿಬ್ಬಂದಿ ಉತ್ಖನನ ಕಾರ್ಯದಲ್ಲಿ ತೊಡಗಿದ್ದು, ನಾಜೂಕಾಗಿ ಉತ್ಖನನ ನಡೆಸಲಾಗುತ್ತಿದೆ.

ರಾಮಪ್ರಸಾದ ಬಿಸ್ಮಿಲ್ಲ ಅದಮ್ಯ ಕ್ರಾಂತಿಕಾರಿ

● **ಕನ್ನಡಪ್ರಭ ವಾರ್ತೆ** ಸಂಡೂರು

ರಾಮಪ್ರಸಾದ ಬಿಸ್ಮಿಲ್ಲ ಒಬ್ಬ ಅದಮ್ಯ, ಸಾಹಸಿ ಕ್ರಾಂತಿಕಾರಿಯಾಗಿದ್ದರು. ಭಾರತವನ್ನು ಬ್ರಿಟಿಷರ ದಾಸ್ಯದ ಸಂಕೋಲೆಯಿಂದ ಬಿಡಿಸಲು ಶ್ರದ್ಧೆಯಿಂದ ಶ್ರಮಿಸಿದ ಅಮೋಘ ಕ್ರಾಂತಿಕಾರಿ ಎಂದು ಶ್ರೀಶೈಲೇಶ್ವರ ವಿದ್ಯಾಕೇಂದ್ರದ ಆಡಳಿತಾಧಿಕಾರಿ ಕುಮಾರ.ಎಸ್. ನಾನಾವಣೆ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಕ್ರಾಂತಿಕಾರಿಗಳಿಗೆ ನುಡಿನಮನ ಸಲ್ಲಿಸಿದರು.

ಪಟ್ಟಣದ ಲಕ್ಷ್ಮೀ ಎಸ್.ನಾನಾವಟೆ ಶಿಕ್ಷಣ ಮಹಾವಿದ್ಯಾಲಯ ಹಾಗೂ ಭಾರತೀಯ ಸ್ವರಾಜ್ಯ ಸಂಸ್ಥೆಯ ಸಹಯೋಗದಲ್ಲಿ ಗುರುವಾರ ನಡೆದ ಕ್ರಾಂತಿಕಾರಿಗಳಿಗೆ ನುಡಿ ನಮನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ರಾಮಪ್ರಸಾದ ಬಾಲ್ಯದಿಂದಲೂ ಕ್ರಾಂತಿಕಾರಿ ಮನೋಭಾವನೆ ಹೊಂದಿದ್ದರು. ಲೇಖಕರಾದ ಅವರು ಅಮೆರಿಕಸ್ವಾತಂತ್ರ್ಯ ಹೋರಾಟವನ್ನು ಹಿಂದಿ ಭಾಷೆಯಲ್ಲಿ ರಚನೆ ಮಾಡಿ ಪ್ರಕಟಿಸಿದರು. ಈ ಪುಸ್ತಕವನ್ನು ಬ್ರಿಟಿಷ್ ಸರ್ಕಾರ ನಿಷೇಧಿಸಿತು. ಧೃತಿಗೆಡದ ರಾಮಪ್ರಸಾದ ಬಿಸ್ಮಿಲ್ಲ ಮಾತೃವೇದಿ ಎಂಬ ಕಾಂತಿಕಾರಿ ಸಂಘ ಕಟ್ಟಿ, ಸಂಘದ ಆರ್ಥಿಕ ಅವಶ್ಯಕತೆಗಳಿಗಾಗಿ ಬ್ರಿಟಿಷರನ್ನು ಲೂಟಿ ಮಾಡಲು ನಿಶ್ಚಯಿಸಿ, ಇದನ್ನು ಮೂರು ಹಂತಗಳಲ್ಲಿ ಕಾರ್ಯಗತಗೊಳಿಸಲಾಯಿತು ಎಂದರು.

ಸಂಡೂರಿನ ಲಕ್ಷ್ಮೀ ಎಸ್.ನಾನಾವಟೆ ಶಿಕ್ಷಣ ಮಹಾವಿದ್ಯಾಲಯದಲ್ಲಿ ಗುರುವಾರ ನಡೆದ ಕ್ರಾಂತಿಕಾರಿಗಳಿಗೆ ನುಡಿ ನಮನ ಕಾರ್ಯಕ್ರಮದಲ್ಲಿ ಬಿ.ಇಡಿ ಪ್ರಶಿಕ್ಷಣಾರ್ಥಿಗಳು ಭಾಗವಹಿಸಿದ್ದರು.

ದೆಹಲಿ ಮತ್ತು ಆಗ್ರಾ ನಡುವೆ ರೈಲಿನಲ್ಲಿ ಸಾಗಿಸುತ್ತಿದ್ದ ಸರ್ಕಾರಿ ಖಜಾನೆಯನ್ನು ಲೂಟಿಗೈದರು. 1925ರಲ್ಲಿ ಕಾಕೋರಿಯಲ್ಲಿ ಸರ್ಕಾರಿ ಖಜಾನೆಯನ್ನು ಲೂಟಿ ಮಾಡಿದರು. ಇವರ ಜೊತೆಗೆ ರೋಷನ್‌ಸಿಂಗ್ ಹಾಗೂ ಅಶ್ಫಾಕುಲ್ಲಾಖಾನ್ ಕೈಜೋಡಿಸಿದರು ಎಂದರು.

ನ್ಯಾಯಲಯವು ರಾಮಪ್ರಸಾದ ಬಿಸ್ಮಿಲ್ಲ, ಅಶ್ಫಾಕುಲ್ಲಾ ಖಾನ್ ಹಾಗೂ ರೊಷನ್ ಸಿಂಗ್ ಅವರಿಗೆ ಮರಣದಂಡನೆ ಶಿಕ್ಷೆಯನ್ನು ವಿಧಿಸಿತು ಎಂದು ವಿವರಿಸಿದರು.

ಈ ಸಂದರ್ಭದಲ್ಲಿ ಪ್ರಾಚಾರ್ಯ ಯು. ದೇವರಾಜ್, ಸಿಬ್ಬಂದಿ, ಬಿ.ಇಡಿ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

> ■ ರಾಮಪ್ರಸಾದ ಬಾಲ್ಯದಿಂದಲೂ ಕ್ರಾಂತಿಕಾರಿ ಮನೋಭಾವನೆ ಹೊಂದಿದ್ದರು.
> ■ ಲೇಖಕರಾದ ಅವರು ಅಮೆರಿಕ ಸ್ವಾತಂತ್ರ್ಯ ಹೋರಾಟವನ್ನು ಹಿಂದಿ ಭಾಷೆಯಲ್ಲಿ ರಚನೆ ಮಾಡಿ ಪ್ರಕಟಿಸಿದರು.

ಸಂಡೂರು ತಾಲೂಕಿನ ತೋರಣಗಲ್ಲಿನ ವಿಶಾಲ ಅಂಗನವಾಡಿಯಲ್ಲಿ ಗುರುವಾರ ನಡೆದ ಚಿಣ್ಣದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಚಿಣ್ಣರು ನೃತ್ಯ ಪ್ರದರ್ಶಿಸಿದರು.

ತೋರಣಗಲ್ಲು ಅಂಗನವಾಡಿ ಕೇಂದ್ರದಲ್ಲಿ ನಡೆದ ಚಿಣ್ಣರ ಸಾಂಸ್ಕೃತಿಕ ಕಾರ್ಯಕ್ರಮ

ಸಂಡೂರು ತಾಲೂಕಿನ ತೋರಣಗಲ್ಲಿನ ವಿಶಾಲ ಅಂಗನವಾಡಿಯಲ್ಲಿ ನಡೆದ ಚಿಣ್ಣರ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಜೆಎಸ್‌ಡಬ್ಲ್ಯು ಸ್ಟೀಲ್ ಹಿರಿಯ ಉಪಾಧ್ಯಕ್ಷ ಸುನಿಲ್ ರಾಲ್ಹ್ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ಮಕ್ಕಳಿಗೆ ಬಹುಮಾನ ವಿತರಿಸಿದರು.

● **ಕನ್ನಡಪ್ರಭ ವಾರ್ತೆ** ಸಂಡೂರು

ತಾಲೂಕಿನ ತೋರಣಗಲ್ಲಿನ ವಿಶಾಲ ಅಂಗನವಾಡಿ ಕೇಂದ್ರದಲ್ಲಿ ಗುರುವಾರ ಚಿಣ್ಣರ ಸಾಂಸ್ಕೃತಿಕ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಜೆಎಸ್‌ಡಬ್ಲ್ಯು ಸ್ಟೀಲ್‌ನ ಹಿರಿಯ ಉಪಾಧ್ಯಕ್ಷ ಸುನಿಲ್ ರಾಲ್ಹ್, ಮಕ್ಕಳಿಗೆ ಬಾಲ್ಯದಲ್ಲಿ ನೀಡುವ ಗುಣಮಟ್ಟದ ಶಿಕ್ಷಣ ಮಕ್ಕಳ ಉತ್ತಮ ಭವಿಷ್ಯಕ್ಕೆ ಸಹಕಾರಿಯಾಗಲಿದೆ. ಉತ್ತಮ ಶಿಕ್ಷಣ ಜೀವನವನ್ನು ಬದಲಿಸಲಿದೆ. ಇಂದಿನ ಡಿಜಿಟಲ್ ಯುಗದಲ್ಲಿ ಮಕ್ಕಳಿಗೆ ಮೌಲ್ಯಯುತವಾದ ಶಿಕ್ಷಣ ನೀಡುವುದು ನಮ್ಮ ಆದ್ಯತೆಯಾಗಿರಲಿದೆ ಎಂದು ತಿಳಿಸಿದರು.

ಜೆಎಸ್‌ಡಬ್ಲ್ಯು ಫೌಂಡೇಶನ್ ಸಿಎಸ್‌ಆರ್‌ಮುಖ್ಯಸ್ಥ ಪೆದ್ದಣ್ಣ ಬೀಡಲಾ ಮಾತನಾಡಿ, ಬಾಲ್ಯದ ಶಿಕ್ಷಣ ಮತ್ತು ಆರೈಕೆಗಾಗಿ ಜೆಎಸ್‌ಡಬ್ಲ್ಯು ಫೌಂಡೇಶನ್ 2 ವಿಶಾಲ ಅಂಗನವಾಡಿ ಕೇಂದ್ರಗಳಿಗೆ ನೆರವು ನೀಡುತ್ತಿದ್ದು, ಇದುವರೆಗೆ ನಾಲ್ಕು ಸಾವಿರಕ್ಕೂ ಹೆಚ್ಚು ಮಕ್ಕಳು ಅಂಗನವಾಡಿ ಕೇಂದ್ರಗಳಿಂದ ಅನುಕೂಲ ಪಡೆದುಕೊಂಡಿದ್ದಾರೆ. ಕೇಂದ್ರಗಳಲ್ಲಿ ಮಕ್ಕಳಿಗೆ ಪೌಷ್ಟಿಕ ಆಹಾರ ನೀಡುತ್ತಿದ್ದು, ಇದುವರೆಗೆ ಯಾವುದೇ ಮಕ್ಕಳಲ್ಲಿ ಅಪೌಷ್ಟಿಕತೆ ಕಾಣಿಸಿಕೊಂಡಿಲ್ಲ. ವಿಶಾಲ ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳ ಶಿಕ್ಷಣ ಹಾಗೂ ಪಠ್ಯೇತರ ಚಟುವಟಿಕೆಗಳಿಗಾಗಿ ನುರಿತ ಶಿಕ್ಷಕಿಯರನ್ನು ನೇಮಿಸಲಾಗಿದೆ ಎಂದರು.

> ■ ಮಕ್ಕಳಿಗೆ ಬಾಲ್ಯದಲ್ಲಿ ನೀಡುವ ಗುಣಮಟ್ಟದ ಶಿಕ್ಷಣ ಮಕ್ಕಳ ಉತ್ತಮ ಭವಿಷ್ಯಕ್ಕೆ ಸಹಕಾರಿಯಾಗಲಿದೆ.
> ■ ಉತ್ತಮ ಶಿಕ್ಷಣ ಜೀವನವನ್ನು ಬದಲಿಸಲಿದೆ.

ಕಾರ್ಯಕ್ರಮದಲ್ಲಿ ಮಕ್ಕಳ ಪೋಷಕರು ಮಕ್ಕಳಿಗಾಗಿ ನಮ್ಮ ಸಮಯ ಎಂಬ ನಾಟಕವನ್ನು ಪ್ರದರ್ಶಿಸಿದರು. ಬಾಲವಾಡಿ ಮಕ್ಕಳು ಯಾರು ದೊಡ್ಡವರು ಎಂಬ ನಾಟಕವನ್ನು ಪ್ರದರ್ಶಿಸಿದರು.

ಕಾರ್ಯಕ್ರಮದಲ್ಲಿ ಜೆಎಸ್‌ಡಬ್ಲ್ಯು ಫೌಂಡೇಶನ್‌ನ ರಾಜಶೇಖರ, ರಾಜು, ಭವಾನಿ ಸಿಂಗ್, ಅಂಗನವಾಡಿ ಶಿಕ್ಷಕಿಯರಾದ ನೀಲಮ್ಮ, ಸುನಿತಾ, ಮಕ್ಕಳು ಹಾಗೂ ಅವರ ಪಾಲಕರು ಭಾಗವಹಿಸಿದ್ದರು. ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ಮಕ್ಕಳಿಗೆ ಬಹುಮಾನ ವಿತರಿಸಲಾಯಿತು.

ವಾಹನ ಡಿಕ್ಕಿ: ಹೆದ್ದಾರಿ ದಾಟುತ್ತಿದ್ದ ಚಿರತೆ ಸಾವು

● **ಕನ್ನಡಪ್ರಭ ವಾರ್ತೆ** ಹೊಸಪೇಟೆ

ತಾಲೂಕಿನ ಜರ್ಮಲಿಯ ಅರಣ್ಯಪ್ರದೇಶದಲ್ಲಿ ರಸ್ತೆ ದಾಟುತ್ತಿದ್ದ ಚಿರತೆಗೆ ಅಪರಿಚಿತ ವಾಹನ ಡಿಕ್ಕಿ ಹೊಡೆದ ಘಟನೆ ಗುರುವಾರ ನಸುಕಿನಜಾವ ಬಣವಿಕಲ್ಲು ಹಾಗೂ ಅಮಲಾಪುರ ಮಧ್ಯದ ರಾ.ಹೆ. 50ರಲ್ಲಿ ನಡೆದಿದೆ. ಸ್ಥಳದಲ್ಲೇ ಚಿರತೆ ಮೃತಪಟ್ಟಿದೆ.

ಸುಮಾರು ಎರಡು ವರ್ಷದ ಹೆಣ್ಣು ಚಿರತೆ ಮೃತಪಟ್ಟಿದೆ. ದುರ್ಘಟನೆಯಲ್ಲಿ ಚಿರತೆಯ ಬಾಯಿ, ಸೊಂಟದ ಕೆಳಗಿನ ಭಾಗಗಳಿಗೆ ತೀವ್ರತರ ಗಾಯಗಳಾಗಿ ಸ್ಥಳದಲ್ಲೇ ಮೃತಪಟ್ಟಿದೆ. ಕರಳು ಸೇರಿದಂತೆ ದೇಹದ ಕೆಲಭಾಗಗಳು ಹೊರಬಿದ್ದಿದ್ದವು. ಘಟನಾ ಸ್ಥಳಕ್ಕೆ ಕೂಡ್ಲಿಗಿ ವಲಯ ಅರಣ್ಯಾಧಿಕಾರಿ ಸಂದೀಪ್ ನಾಯಕ ಹಾಗೂ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಚಿಕ್ಕಜೋಗಿಹಳ್ಳಿಯ ಪಶುವೈದ್ಯಾಧಿಕಾರಿ ಮೃತ ಚಿರತೆಯ ಕಳೇಬರದ ಪರೀಕ್ಷೆ ನಡೆಸಿದ್ದಾರೆ.

VEHICLE FOR SALE
Reg. No: KA-34-C-9967
Model: 2024
Vehicle: TATA-LPT-1816
CONTACT DETAILS
Mobile: 9449840981
Ph: 83942 95008
ADDRESS
SUNDARAM FINANCE LTD.
First Floor, Door No. 760,
Sri. Gurudeva Complex, Opp. to Uday Motors,
(Hero Two Wheeler Showroom),
100 Bed Hospital Road,
Hospet - 583201

VEHICLE FOR SALE
Reg. No: KA-35-D-8076
Model: 2024
Vehicle: MAHINDRA-JEETO STRONG
CONTACT DETAILS
Mobile: 9449840981
Ph: 83942 95008
ADDRESS
SUNDARAM FINANCE LTD.
First Floor, Door No. 760,
Sri. Gurudeva Complex, Opp. to Uday Motors,
(Hero Two Wheeler Showroom),
100 Bed Hospital Road,
Hospet - 583201

ಕೊಂಕಣ ರೈಲ್ವೆ ಕಾರ್ಪೋರೇಷನ್ ಲಿಮಿಟೆಡ್
(ಭಾರತ ಸರ್ಕಾರದ ಒಂದು ಉದ್ಯಮ)
ಇ-ಟೆಂಡರ್ ಆಹ್ವಾನ ಪ್ರಕಟಣೆ
ಕೊಂಕಣ ರೈಲ್ವೇ ಕಾರ್ಪೊರೇಶನ್ ಲಿಮಿಟೆಡ್ ಪರವಾಗಿ, ಸೀನಿಯರ್ ಪ್ರಾದೇಶಿಕ ಇಂಜಿನಿಯರ್, ಕಾರವಾರ ಅವರು ಈ ಕೆಳಗಿನ ಕೆಲಸಕ್ಕಾಗಿ www.ireps.gov.in ಪೋರ್ಟಲ್ ಮೂಲಕ ಓಪನ್ ಇ ಟೆಂಡರ್ ಅನ್ನು ಆಹ್ವಾನಿಸುತ್ತಿದ್ದಾರೆ.
ಕ್ರ.ಸಂ.:1. ಕಾಮಗಾರಿಗಳ ಹೆಸರು: ಕೆಆರ್‌ಸಿಎಲ್‌ನ ಕಾರವಾರ ಪ್ರದೇಶದಲ್ಲಿರುವ ಸೇತುವೆಗಳ ವಾಡಿಕೆಯ ತಳದ ನೀರು ಪರಿವೀಕ್ಷಣೆ ಕೈಗೊಳ್ಳುವುದು. ಟೆಂಡರ್ ಸಂಖ್ಯೆ: ಕೆಆರ್/ಕೆಡಬ್ಲ್ಯೂ/ಓಎಲ್/ಡಬ್ಲ್ಯೂ/ 2024/ 93- ಆರ್